ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ ಇವರು ನಿಯಮ 72ರ ಅಡಿಯಲ್ಲಿ ಇವರು ಗಮನ ಸೆಳೆಯುವ ಸೂಚನೆಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖಾ ಸಚಿವರ ಉತ್ತರ.

ಪ್ರಶ್ನೆ:

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ "ಒಂದು ರಾಷ್ಟ್ರ ಒಂದು ಪಡಿತರ" ಜಾರಿಗೆ ತಂದಿದ್ದು, ಕೋವಿಡ್-19 ಲಾಕ್‌ಡೌನ್ ಸಂದರ್ಭದಲ್ಲಿ ಹೊರ ರಾಜ್ಯದ ಕಾರ್ಮಿಕರು ನಮ್ಮ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅವರಿಗೆ ಪಡಿತರವನ್ನು ತೆಗೆದುಕೊಳ್ಳಲು ತೊಂದರೆಯಾಗಿದ್ದು, ಈ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ " ಒಂದು ರಾಷ್ಟ್ರ ಒಂದು ಪಡಿತರ " ಚೀಟಿ ಯೋಜನೆಯನ್ನು ಕರ್ನಾಟಕದಲ್ಲಿ ವಿಧಿವತ್ತಾಗಿ ಜಾರಿಗೊಳಿಸಲಾಗಿದೆ. ಈ ಯೋಜನೆ ಪ್ರಕಾರ ರಾಷ್ಟ್ರದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ನಮ್ಮ ರಾಜ್ಯದಲ್ಲಿ ಪಡಿತರ ಪಡೆಯಬಹುದು ಅಥವಾ ನಮ್ಮ ರಾಜ್ಯದ ಪಡಿತರ ಚೀಟಿದಾರರು ಪೋರ್ಟಬಿಲಿಟಿ ಯೋಜನೆಯನ್ನು ಅಳವಡಿಸಿಕೊಂಡಿರುವ ರಾಷ್ಟ್ರದ ಇತರೆ ರಾಜ್ಯಗಳಲ್ಲಿ ಪಡಿತರ ಪಡೆಯಬಹುದು. ಅದರಂತೆ ಹೊರರಾಜ್ಯದ ಪಡಿತರ ಚೀಟಿದಾರರು ಕರ್ನಾಟಕದ ವಿವಿಧ ಭಾಗದ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪಡೆಯುವ ಪೋರ್ಟಬಿಲಿಟಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಕರ್ನಾಟಕ ಸರ್ಕಾರವು ಹೊರರಾಜ್ಯದ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರಲ್ಲಿ ವಿಧಿತವಾಗಿರುವಂತೆ ಪ್ರತಿ ವ್ಯಕ್ತಿಗೆ 5 ಕೆ.ಜಿಯನ್ನು ಪ್ರತಿ ಕೆ.ಜಿಗೆ ರೂ.3 ರಂತೆ ವಿತರಿಸಲಾಗುತ್ತಿದೆ.

ಸಾರ್ವಜನಿಕ ವಿತರಣಾ ಪದ್ಧತಿಯಡಿ ರಾಜ್ಯದಲ್ಲಿ ಪಡಿತರ ಚೀಟಿ ಹೊಂದಿರುವವರು ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ಅಥವಾ ಒಂದು ತಾಲ್ಲೂಕಿನಿಂದ ಮತ್ತೊಂದು ತಾಲ್ಲೂಕಿಗೆ ವಲಸೆ ಬಂದಿದಲ್ಲಿ ರಾಜ್ಯದಲ್ಲಿನ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ರಾಜ್ಯ ಸರ್ಕಾರದಿಂದ ವಿತರಿಸಲಾಗುವ ಪಡಿತರ ಆಹಾರ ಧಾನ್ಯಗಳನ್ನು ಉಚಿತವಾಗಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಕೋವಿಡ್-19ರ ಲಾಕ್‌ಡೌನ್ ಸಂದರ್ಭದಲ್ಲಿಯೂ ಸಹ ಮೇಲೆ ವಿವರಿಸುವಂತೆ ಹೊರ ರಾಜ್ಯದ ಕಾರ್ಮಿಕರು ಹಾಗೂ ರಾಜ್ಯದಲ್ಲಿನ ಪಡಿತರ ಚೀಟಿದಾರರು ರಾಜ್ಯದಲ್ಲಿರುವ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ಪಡೆಯುವ ವ್ಯವಸ್ಥೆ ಜಾರಿಗೊಳಿಸಲಾಗಿತ್ತು. ಇದಲ್ಲದೆ ಕೋವಿಡ್-19 ರ ಸಂದರ್ಭದಲ್ಲಿ ವಲಸೆ ಕಾರ್ಮಿಕರಿಗಾಗಿ ಕೇಂದ್ರ ಸರ್ಕಾರದಿಂದ ಆತ್ಮ ನಿರ್ಭರ ಯೋಜನೆಯನ್ನು ಜಾರಿಗೊಳಿಸಲಾಗಿತ್ತು. ಸದರಿ ಯೋಜನೆಯಡಿ ರಾಜ್ಯದಲ್ಲಿ ಮೇ, ಮತ್ತು

ಜೂನ್ 2020 ತಿಂಗಳುಗಳಿಗೆ ಪ್ರತಿ ಫಲಾನುಭವಿಗಳಿಗೆ ತಲಾ 10 ಕೆ.ಜಿ ಅಕ್ಕಿ ಮತ್ತು 2 ಕೆ.ಜಿ ಕಡಲೇಕಾಳನ್ನು ಉಚಿತವಾಗಿ ಹಂಚಿಕೆ ನೀಡಲಾಗಿತ್ತು. ಅದರಂತೆಯೇ ಮೇ 2020 ಆಗಸ್ಟ್ 2020 ಮಾಹೆಯವರೆಗೆ ರಾಜ್ಯದಲ್ಲಿ ಒಟ್ಟು 14.23 ಲಕ್ಷ ಫಲಾನುಭವಿಗಳಿಗೆ 11600.080 ಮೆ.ಟನ್ ಅಕ್ಕಿ ಮತ್ತು 2049.61 ಮೆ.ಟನ್ ಕಡಲೇಕಾಳನ್ನು ವಿತರಿಸಲಾಗಿದೆ. ವಲಸಿಗರಿಗೆ ಕೇವಲ ಅವರ ಆಧಾರ್ ಆಧಾರಿತ ಒಟಿಪಿ ಕ್ರಮವನ್ನು ಅನುಸರಿಸಿ ಯಾವುದೇ ನೈಜ ಫಲಾನುಭವಿಯೂ ಯೋಜನೆಯಿಂದ ಹೊರತಾಗದಂತೆ ಪಾರದರ್ಶಕವಾಗಿ ಆಹಾರ ಧಾನ್ಯ ಹಂಚಿಕೆ ಮಾಡಲಾಗಿರುತ್ತದೆ.

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ "ಒಂದು ರಾಷ್ಟ್ರ ಒಂದು ಪಡಿತರ" ಚೀಟಿ (One Nation One Ration Card) ಯೋಜನೆಯನ್ವಯ ಕರ್ನಾಟಕದಲ್ಲಿ ಹೊರರಾಜ್ಯದ ಪಡಿತರ ಚೀಟಿದಾರರು ರಾಜ್ಯದಲ್ಲಿನ ಯಾವುದೇ ನ್ಯಾಯಬೆಲೆ ಅಂಗಡಿ ಮುಖಾಂತರ ಪಡಿತರವನ್ನು ಪಡೆಯುವ ಯೋಜನೆಯನ್ನು ಮುಂದುವರೆಸಲಾಗಿದೆ.

ಆನಾಸ 37 ಡಿಆರ್ ಎ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.